ಸಂಖ್ಯೆ : ಬೆಂ.ಅ.ಪ್ರಾ/ನಮ/ಅ.ಸ/ಅ.ಅ–3/ತಾ.ಸ–4/ಪೂ/21/2018–19 ದಿನಾಂಕ : **05.07.2018**
No. Date :

ಅನುಸೂಚಿ–ಎ 5
(ಉಪವಿಧಿ ಸಂಖ್ಯೆ:4.1)
**ನಕ್ಷೆ ಮಂಜೂರಾತಿ ಪತ್ರ**

ಅಭಿಯಂತರ ಸದಸ್ಯರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

ಶ್ರೀಮತಿ/ಶ್ರೀ

**M/s. APG Intelli Homes Private Limited,**
**ಎಂಬಾಸ್ಸಿ ಐಕಾನ್, ನೆಲಮಹಡಿ,**
**ನಂ. 03, ಇನ್ಫ್ಯಾಂಟ್ರಿ ರಸ್ತೆ,**
**ಬೆಂಗಳೂರು 560 001**

**ಮಾನ್ಯರೆ,**

ನೀವು ದಿನಾಂಕ: 31.05.2018 ರಲ್ಲಿ ಈ ಕಛೇರಿಗೆ ಅರ್ಜಿ ಸಲ್ಲಿಸಿ **ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಕೊಡತಿ ಗ್ರಾಮದ ಸರ್ವೆ ನಂ. 69/1, 69/2, 69/3, 69/4 ಮತ್ತು 171 ರಲ್ಲಿ ನಿರ್ಮಿಸಲು ಉದ್ದೇಶಿಸಿರುವ ಕಟ್ಟಡ–1 ರಲ್ಲಿ ನೆಲ+03 ಮೇಲಂತಸ್ತುಗಳನ್ನೊಳಗೊಂಡ 10 ಘಟಕಗಳು, ಕಟ್ಟಡ–2 ರಲ್ಲಿ ನೆಲ+03 ಮೇಲಂತಸ್ತುಗಳನ್ನೊಳಗೊಂಡ 02 ಘಟಕಗಳು, ಕಟ್ಟಡ–3 ರಲ್ಲಿ ನೆಲ+03 ಮೇಲಂತಸ್ತುಗಳನ್ನೊಳಗೊಂಡ 12 ಘಟಕಗಳು, ಕಟ್ಟಡ–4 ರಲ್ಲಿ ನೆಲ+03 ಮೇಲಂತಸ್ತುಗಳನ್ನೊಳಗೊಂಡ 06 ಘಟಕಗಳು, ಕಟ್ಟಡ–5 ರಲ್ಲಿ ನೆಲ+03 ಮೇಲಂತಸ್ತುಗಳನ್ನೊಳಗೊಂಡ 07 ಘಟಕಗಳು, ಕಟ್ಟಡ–6 ರಲ್ಲಿ ನೆಲ+03 ಮೇಲಂತಸ್ತುಗಳನ್ನೊಳಗೊಂಡ 10 ಘಟಕಗಳು ಒಟ್ಟು (10+2+12+6+7+10) 47 ಘಟಕಗಳ ಸಾಲುವಸತಿ ಕಟ್ಟಡಗಳನ್ನು ನಿರ್ಮಿಸಲು ಕಟ್ಟಡದ ನಕ್ಷೆಗೆ** ಮಾನ್ಯ ಆಯುಕ್ತರವರ ಕಛೇರಿ ಆದೇಶದ ಸಂಖ್ಯೆ: **1416,** ದಿನಾಂಕ: **25.06.2018** ರಂದು ಅನುಮೋದನೆ ನೀಡಿದ್ದು, ನಿರ್ಮಾಣದಾರರು ಚಲನ್ ಸಂಖ್ಯೆ: **19315,** ದಿನಾಂಕ: **04.07.2018** ರಂದು ಒಟ್ಟು ರೂ. **30,03,635/–** ಗಳನ್ನು ಪಾವತಿಸಿರುತ್ತಾರೆ. ಅದರಂತೆ ದಿನಾಂಕ: **05.07.2018** ರಲ್ಲಿ ನಕ್ಷೆ ಮಂಜೂರಾತಿ ಮಾಡಲಾಗಿದೆ. ದಿನಾಂಕ: **05.07.2018** ರಿಂದ ದಿನಾಂಕ: **04.07.2020** ವರೆಗಿನ ಎರಡು ವರ್ಷಗಳ ಅವಧಿಗೆ ಮಾತ್ರ ಮಾನ್ಯತೆ ಪಡೆದಿರುತ್ತದೆ. ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಮಂಜೂರಾತಿ ಮಾಡಲಾಗಿದೆ ಎಂದು ಈ ಮೂಲಕ ನಾನು ತಿಳಿಯಪಡಿಸಿದ್ದೇನೆ.

ಷರತ್ತುಗಳು

1) ಪ್ರಾಧಿಕಾರದ ಮಂಜೂರಾದ ನಕ್ಷೆಯ ಪ್ರತಿಯನ್ನು ಕಟ್ಟಡ ನಿರ್ಮಾಣ ಮಾಡುವ ಸ್ಥಳದಲ್ಲಿ ಪ್ರದರ್ಶಿಸತಕ್ಕದ್ದು.
2) ಸಂಬಂಧಪಟ್ಟ ಪ್ರಾಧಿಕಾರದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರಿಗೆ ಅರ್ಜಿ ಸಲ್ಲಿಸಿ ಪ್ರಾರಂಭ ಮಾಡಲು ಸೂಕ್ತ ಅನುಮತಿ ಪತ್ರ ಪಡೆಯತಕ್ಕದ್ದು.
3) ಮಂಜೂರಾತಿಯಾದ ನಕ್ಷೆಯ ಪ್ರಕಾರ ಕಟ್ಟಡ ನಿರ್ಮಾಣ ಮಾಡತಕ್ಕದ್ದು.
4) ಪೂರ್ಣಗೊಂಡ ಕಟ್ಟಡ ಅಥವಾ ಮನೆಯನ್ನು ವಾಸಕ್ಕೆ ಉಪಯೋಗಿಸುವ ಮೊದಲು ಸಂಬಂಧಪಟ್ಟ ಅಧಿಕಾರಿಗಳಿಂದ (ಪ್ರಾಧಿಕಾರದ) ವಾಸಯೋಗ್ಯ ಅನುಮತಿ ಪತ್ರವನ್ನು ಪಡೆಯತಕ್ಕದ್ದು.
5) ನಿವೇಶನದ ಸುತ್ತಳತೆಯಲ್ಲಿ ಹಸಿರು ಸಸಿಗಳನ್ನು ನೆಡುವುದು.
6) ಇವುಗಳೊಂದಿಗೆ ಈ ಪುಟದ ಹಿಂಬಾಗದಲ್ಲಿ ನಮೂದಿಸಿರುವ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.

ಅಡಕ: ಅನುಸೂಚಿ 2,6 ಹಾಗೂ 8
ಲಗತ್ತಿಸಿದೆ.

ಪುಟ ಸಂಖ್ಯೆ: 2 ಕ್ಕೆ ಮುಂದುವರೆದಿದೆ...

## -:ಷರತ್ತುಗಳು:-

1) ವಿವಿಧ ಶಾಸನಬದ್ಧ ಸಂಸ್ಥೆಗಳಿಂದ ನೀಡಿರುವ ನಿರಾಪೇಕ್ಷಣಾ ಪತ್ರದಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳಿಗೆ ಬದ್ಧರಾಗಿರುವುದು ಇಲ್ಲವಾದಲ್ಲಿ ಸ್ವಾಧೀನಾನುಭವ ಪತ್ರ ನೀಡಲಾಗುವುದಿಲ್ಲ.

2) ಬಂಡಿದಾರಿ / ರಾಜ ಕಾಲುವೆ / ಮಳೆ ನೀರು ಚರಂಡಿ ಇನ್ನೂ ಯಾವುದೇ ತರಹದ ಖರಾಬು ಜಮೀನು ಸದರಿ ಜಮೀನಿನ ವಿಸ್ತೀರ್ಣದಲ್ಲಿ ಇದ್ದಲ್ಲಿ ಆ ಪ್ರದೇಶವನ್ನು ಯಾವುದೇ ತರಹದ ನಿರ್ಮಾಣದ ಕಾರ್ಯವನ್ನು ಮಾಡುವಂತಿಲ್ಲ ಹಾಗೂ ಇತರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದಲ್ಲ ಮತ್ತು ಅಂತಹ ಪ್ರದೇಶಕ್ಕೆ ಸೂಕ್ತ ರಕ್ಷಣೆ ಒದಗಿಸುವುದು.

3) ಅಭಿವೃದ್ಧಿದಾರರು ಕಟ್ಟಡದ ನಿರ್ಮಾಣದ ವೆಚ್ಚ ರೂ. 650 ಪ್ರತಿ ಚ.ಅಡಿಗಿಂತ ಅಥವಾ 6996 ಚ.ಮೀ ಗಿಂತ ಹೆಚ್ಚಾದಲ್ಲಿ ಶೇ 1% ರಷ್ಟು ಕಾರ್ಮಿಕ ಕಲ್ಯಾಣ ಶುಲ್ಕವನ್ನು ಕಟ್ಟಡ ನಿರ್ಮಾಣಕ್ಕೆ ತಗಲುವ ವ್ಯತ್ಯಾಸದ ಮೊತ್ತಕ್ಕೆ ಅನುಗುಣವಾಗಿ ಪೂರ್ಣ ಕಟ್ಟಡದ ವಿಸ್ತೀರ್ಣಕ್ಕೆ ಪಾವತಿಸುವುದು. ಸದರಿ ಮೊತ್ತವನ್ನು ಬಿಡಿಎ ಗಾಗಲಿ ಅಥವಾ ಕಾರ್ಮಿಕ ಇಲಾಖೆಗಾಗಲಿ ಪಾವತಿಸುವುದು.

4) ಅಭಿವೃದ್ಧಿದಾರರು ಭದ್ರತಾ ಸಿಬ್ಬಂದಿಯವರನ್ನು ನೇಮಿಸಿ ಕಟ್ಟಡ ನಿರ್ಮಾಣದ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ವಾಹನ ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳತಕ್ಕದ್ದು, ಹಾಗೂ ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಸ್ವತ್ತಿನ ಒಳಬಾಗದಲ್ಲಿ ಅಳವಡಿಸಿ ನಿರ್ವಹಿಸುವುದು.

5) ಅರ್ಜಿದಾರರು ಶಾಸನಬದ್ಧ ಸಂಸ್ಥೆಗಳಿಗೆ, ಬಿಡಿಎ / ಬಿಬಿಎಂಪಿ ಗೆ ಯಾವುದಾದರೂ ಬಾಕಿ ಶುಲ್ಕಗಳನ್ನು ಪಾವತಿಸಬೇಕಿದ್ದಲ್ಲಿ ಅಂತಹ ಸಂಸ್ಥೆಗಳು ವಿಧಿಸುವ ಶುಲ್ಕವನ್ನು ಪಾವತಿಸತಕ್ಕದ್ದು.

6) ಅರ್ಜಿದಾರರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಕಾಲ ಕಾಲಕ್ಕೆ ವಿಧಿಸುವ ಎಲ್ಲಾ ನಿಭಂದನೆಗಳಿಗೆ ಬದ್ಧರಾಗಿರತಕ್ಕದ್ದು.

7) ಮಳೆ ನೀರು ಕೊಯ್ಲನ್ನು ಕಡ್ಡಾಯವಾಗಿ ಅಳವಡಿಸುವುದು.

8) ಇಬ್ಬಗೆಯ ಕೊಳವೆ ವಿಧಾನವನ್ನು ಕುಡಿಯುವ ನೀರಿಗಾಗಿ ಹಾಗೂ ಇತರೆ ಉದ್ದೇಶಿತ ವ್ಯವಸ್ಥೆಗಳಿಗಾಗಿ ಅಳವಡಿಸುವುದು.

9) ಒಳಚರಂಡಿ ವ್ಯವಸ್ಥೆಗಾಗಿ ಸ್ಥಾಪಿಸಿದ ನೈರ್ಮಲ್ಯ ಶುದ್ಧೀಕರಣ ಘಟಕವನ್ನು (S.T.P) ಅಳವಡಿಸಿ ಹಾಗೂ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿನ ಶೌಚಾಲಯ, Gardening ಹಾಗೂ ಗಿಡಮರ Lawn ಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು ಮತ್ತು ಇದರಿಂದ ಉತ್ಪತ್ತಿಯಾಗುವ Sewage ಪೂರ್ಣ ನೀರನ್ನು ಯಾವುದೇ ಕಾರಣಕ್ಕೂ ಕೆರೆ/ಹಳ್ಳ/ಕಣಿವೆ/ಹೊಳೆಗೆ ಬಿಡತಕ್ಕದಲ್ಲ.

10) ಅಭಿವೃದ್ಧಿದಾರರು ಕಟ್ಟಡದ ಆವರಣಗಳಲ್ಲಿ ಗಿಡ ಮರಗಳನ್ನು ಬೆಳೆಸಿ ಪರಿಸರವನ್ನು ಸಂರಕ್ಷಿಸುವ ಷರತ್ತಿಗೆ ಬದ್ಧರಾಗಿರತಕ್ಕದ್ದು.

11) ಅಭಿವೃದ್ಧಿದಾರರು ಕಟ್ಟಡಕ್ಕೆ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.

12) ಅಭಿವೃದ್ಧಿದಾರರು ಟ್ರಾನ್ಸ್‌ಫಾರ್ಮರ್ ಗಾಗಿ ಗುರುತಿಸಿರುವ ಪ್ರದೇಶದಲ್ಲಿ ಅಳವಡಿಸತಕ್ಕದ್ದು, ಬೇರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದಲ್ಲ.

13) ಅಭಿವೃದ್ಧಿದಾರರು ಕಟ್ಟಡದ ಸುರಕ್ಷತೆ ಹಾಗೂ ಭದ್ರತೆಯ, ಕಟ್ಟಡದ ರಚನ್ಮಾತಕ ವಿನ್ಯಾಸದ ಬಗ್ಗೆ ಸಂಪೂರ್ಣವಾಗಿ ಜವಬ್ದಾರರಾಗಿರತಕ್ಕದ್ದು. ಕಟ್ಟಡದ ರಚನ್ಮಾತಕ ವಿನ್ಯಾಸದ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯ ಹೊಣೆಗಾರಿಕೆ ಮತ್ತು ಜವಾದ್ದಾರಿಯನ್ನು ಹೊಂದಿರುವುದಿಲ್ಲ. ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣಕ್ಕೆ, ಕಾರ್ಮಿಕರು ಹಾಗೂ ನಿರ್ಮಾಣದ ಬಗ್ಗೆ ಎಲ್ಲಾ ಸೂಕ್ತ ಕ್ರಮಗಳನ್ನು ಅಳವಡಿಸಕೊಳ್ಳತಕ್ಕದ್ದು, ನಿರ್ಮಾಣ ಸಮಯದಲ್ಲಿ ಯಾವುದೇ ತರಹದ ಅನಾಹುತ ಅಥವಾ ಪ್ರಾಣ ಹಾನಿಯಾಗದಂತೆ ಕಟ್ಟುನಿಟ್ಟಿನ ಎಚ್ಚರವಹಿಸತಕ್ಕದ್ದು, ಯಾವುದೇ ತರಹದ ಅನಾಹುತಕ್ಕೆ ನಿರ್ಮಾಣದಾರು / ಮಾಲೀಕರೇ ನೇರ ಜವಬ್ದಾರರಾಗಿರುತ್ತಾರೆ. ಅಂತಹ ಪ್ರಸಂಗ ಕಂಡುಬಂದಲ್ಲಿ ಕಾನೂನು ಕ್ರಮ ಜರುಗಿಸುವುದಲ್ಲದೆ ನೀಡಲಾಗಿರುವ ಮಂಜೂರಾತಿಯು ತಂತಾನೆ ರದ್ದಾಗುತ್ತದೆ.

14) ಅಭಿವೃದ್ಧಿದಾರರು ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳಿಂದಾಗಲೀ ಅಥವಾ ಇನ್ನಾವುದೇ ಕಟ್ಟಡದ ಅನುಪಯುಕ್ತ ಸಾಮಗ್ರಿಗಳಿಂದ ಸಾರ್ವಜನಿಕರಿಗೆ ಹಾಗೂ ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು. ಇದಕ್ಕೆ ಅನುಗುಣವಾಗಿ ಬ್ಯಾರಿಕೇಡಿಂಗ್ ಅನ್ನು ಅಳವಡಿಸಿ ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು.

ಪುಟ ಸಂಖ್ಯೆ: 3 ಕ್ಕೆ ಮುಂದುವರೆದಿದೆ..

15) ಅಭಿವೃದ್ಧಿ ಯೋಜನೆಯಲ್ಲಿ ಘನ ತ್ಯಾಜ್ಯಗಳನ್ನು ಪ್ಲಾಸ್ಟಿಕ್ ಹಾಗೂ ಇತ್ಯಾದಿಯಾಗಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು ಹಾಗೂ ನಿಗಧಿತ ಸ್ಥಳ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.

16) ಅರ್ಜಿದಾರರು ಲೈಸೆನ್ಸ್ ಅನ್ನು ಸ್ಥಳೀಯ ಸಂಸ್ಥೆಯಿಂದ ಕಟ್ಟಡ ಕಾಮಗಾರಿ ಪ್ರಾರಂಭಿಸುವ ಮುನ್ನ ಕಡ್ಡಾಯವಾಗಿ ಪಡೆಯತಕ್ಕದ್ದು.

17) ಕಾರ್ಯದರ್ಶಿ, ಕಾರ್ಮಿಕ ಇಲಾಖೆ ರವರ ಪತ್ರ ದಿನಾಂಕ: 04-03-2006 ರ ಪತ್ರದಲ್ಲಿ ವಿಧಿಸಿರುವ ಷರತ್ತುಗಳಿಗೆ ಅಭಿವೃದ್ಧಿದಾರರು ಬದ್ಧರಾಗಿರತಕ್ಕದ್ದು.

18) ಕಟ್ಟಡ ನಿರ್ಮಾಣ ಸಮಯದಲ್ಲಿ ಸೆಂಟರಿಂಗ್ ಅಥವಾ ಇನ್ನಿತರೇ ಕಾರಣಗಳಿಂದ ಏನಾದರೂ ಅನಾಹುತ ಸಂಬವಿಸಿದ್ದಲ್ಲಿ ಅದಕ್ಕೆ ಅಭಿವೃದ್ಧಿದಾರರೇ ಜವಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರು ಮಾಡಿದ ಯಾವುದೇ ಇಲಾಖೆ / ಸಂಸ್ಥೆಯು ಜವಬ್ದಾರರಾಗಿರುವುದಿಲ್ಲ. ಆದುದರಿಂದ ನಿರ್ಮಾಣ ಸಮಯದಲ್ಲಿ ಎಲ್ಲಾ ಜಾಗೃತ / ಸುರಕ್ಷಿತ ಕ್ರಮಗಳನ್ನು ಕಟ್ಟುನಿಟ್ಟಾಗಿ ಅಳವಡಿಸಿಕೊಳ್ಳತಕ್ಕದ್ದು, ತಪ್ಪಿದ್ದಲ್ಲಿ ನೀಡಲಾಗಿರುವ ಮಂಜೂರಾತಿಯನ್ನು ಯಾವ ಮುನ್ಸೂಚನೆಯಿಲ್ಲದೆ ರದ್ದುಗೊಳಿಸಲಾಗುವುದು.

19) ಅಭಿವೃದ್ಧಿದಾರರ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲಿಕತ್ವದ ಬಗ್ಗೆ ಯಾವುದೇ ತಪ್ಪು ಮಾಹಿತಿ / ದಾಖಲಾತಿ ನೀಡಿದ್ದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ನಕ್ಷೆ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮಕೈಗೊಳ್ಳಲಾಗುವುದು.

20) ಅಭಿವೃದ್ಧಿದಾರರು ಕುಡಿಯುವ ನೀರಿನ ಸರಬರಾಜಿಗಾಗಿ ಸಂಬಂಧಪಟ್ಟ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯನ್ನು ಅವಲಂಬಿಸದೆ ನೀರಿನ ಸರಬರಾಜಿಗಾಗಿ ತಮ್ಮ ಸ್ವಂತ ವ್ಯವಸ್ಥೆಯನ್ನು ಮಾಡಿಕೊಳ್ಳತಕ್ಕದ್ದು.

21) ಅಭಿವೃದ್ಧಿದಾರರು ಕಟ್ಟಡದ ಕಾಮಗಾರಿ ಪ್ರಾರಂಭಿಸುವ ಮುನ್ನ ಸದರಿ ಕಟ್ಟಡಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರುಗಳಿಗೆ ಶೌಚಾಲಯಗಳನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು ಹಾಗೂ ಸದರಿ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಇಲ್ಲವಾದಲ್ಲಿ ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗುವುದಿಲ್ಲ ಹಾಗೂ ನೀಡಲಾಗಿರುವ ನಕ್ಷೆ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆಯಿಲ್ಲದೆ ರದ್ದುಪಡಿಸಲಾಗುವುದು.

22) ಕಟ್ಟಡ ನಿರ್ಮಾಣ ಸಮಯದಲ್ಲಿ ಸುತ್ತಮುತ್ತಲಿನ ಪ್ರದೇಶಕ್ಕೆ ಅನಗತ್ಯ ಶಬ್ದ ಮಾಲಿನ್ಯ ತಡೆಗಟ್ಟುವ ಸಂಬಂಧ, ನಿರ್ಮಾಣದ ಹೊರಭಾಗಗಳಿಗೆ ಅಗತ್ಯ ರಕ್ಷಣಾ ಕವಚವನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿರವರ ಸಲಹೆಯಂತೆ ಕಡ್ಡಾಯವಾಗಿ ಅಳವಡಿಸತಕ್ಕದ್ದು.

23) ಅರ್ಜಿದಾರರು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ರವರಿಂದ ಮಾರ್ಪಾಡಿತ ನಿರಾಕ್ಷೇಪಣಾ ಪತ್ರವನ್ನು ಕಟ್ಟಡ ಕಾಮಗಾರಿ ಪ್ರಾರಂಭಿಸುವ ಮುನ್ನ ಪಡೆಯತಕ್ಕದ್ದು, ಇಲ್ಲವಾದಲ್ಲಿ ನೀಡಲಾಗಿರುವ ಮಂಜೂರಾತಿನ್ನು ರದ್ದುಗೊಳಿಸಲಾಗುವುದು.

5/7/2018

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

ಯಥಾಪ್ರತಿಯನ್ನು ಕಾರ್ಯಪಾಲಕ ಅಭಿಯಂತರು, ಪೂರ್ವ ವಿಭಾಗ, ಬಿ.ಡಿ.ಎ. ವಾಣಿಜ್ಯ ಸಂಕೀರ್ಣ, ಹೆಚ್.ಎಸ್.ಆರ್. ಬಡಾವಣೆ, ಬೆಂಗಳೂರು ರವರ ಮಾಹಿತಿಗಾಗಿ ರವಾನಿಸಿದೆ.